ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಅಧಿಕಾರಿಗಳ ತನಿಖೆ ವಿವರ ಕುರಿತು

ಶ್ರೀ ಅರವಿಂದ ಕುಮಾರ್ ಅರಳಿ(ವಿಧಾನಸಭೆಯಿಂದ  ಚುನಾಯಿತರಾದವರು) -

01 (56) ಮಾನ್ಯ ಪಶುಸಂಗೋಪನೆ ಮತ್ತು ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) 2016-17 ಮತ್ತು 2017-18ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಸಾಲ ಪಡೆದ ಫಲಾನುಭವಿಗಳು ಸಾಲ ಪಡೆದ ಉದ್ದೇಶಕ್ಕಾಗಿ ಬಳಸಿಕೊಳ್ಳದೆ ಕೇವಲ ಸರ್ಕಾರದಿಂದ ಸಿಗುವ ಸಬ್ಸಿಡಿ ಹಣ ಮಾತ್ರ ಪಡೆದುಕೊಂಡು ಸರ್ಕಾರಕ್ಕೆ ಮೋಸ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಫಲಾನುಭವಿಗಳನ್ನು ತನಿಖೆಗೆ ಒಳಪಡಿಸಲಾಗಿದೆಯೇ; ತನಿಖೆ ನಡೆಸುವುದಾದರೆ ಯಾವಾಗ ನಡೆಸಲಾಗುವುದು;

(ಆ) ಇದರಲ್ಲಿ ಭಾಗಿಯಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ನೀಡುವುದು)